**Akashvani : Bangalore**
**Regional Bulletin In Kannada**
**27.06.2025 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**27.06.2025 / 14.30 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಬೆಂಗಳೂರು, ದೇವನಹಳ್ಳಿ ಸೇರಿದಂತೆ ರಾಜ್ಯದ ಹಲವೆಡೆ ನಾಡಪ್ರಭು ಕೆಂಪೇಗೌಡರ ೫೧೬ನೇ ಜಯಂತಿ ಆಚರಣೆ

೨. ೨೦೩೦ರ ವೇಳೆಗೆ ೫೦೦ ಗಿಗಾವ್ಯಾಟ್ ಹಸಿರು ಇಂಧನ ಉತ್ಪಾದನೆಗೆ ಕೇಂದ್ರ ಸರ್ಕಾರದ ಗುರಿ

೩. ದ್ವೇಷ ಭಾಷಣ, ಪ್ರಚೋದನಾತ್ಮಕ ಭಾಷಣ ಮಾಡುವವರ ವಿರುದ್ಧ ಕ್ರಮಕ್ಕೆ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಸೂಚನೆ

೪. ಮಲೆ ಮಹದೇಶ್ವರ ಬೆಟ್ಟದಲ್ಲಿ ವಿಷ ಪ್ರಾಶನದಿಂದ ಹುಲಿ ಕುಟುಂಬ ಸಾವು; ತನಿಖೆ ಆರಂಭ

**<><*<><>*><>**

ಇಂದು ನಾಡಪ್ರಭು ಕೆಂಪೇಗೌಡದ ೫೧೬ನೇ ಜಯಂತಿಯನ್ನು ರಾಜ್ಯಾದ್ಯಂತ ಆಚರಿಸಲಾಯಿತು.

ರಾಜ್ಯ ಸರ್ಕಾರ, ಮಾಗಡಿ ಕೆಂಪೇಗೌಡ ಪ್ರಾಧಿಕಾರ ಹಾಗೂ ಬಿಬಿಎಂಪಿ ವತಿಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮದಲ್ಲಿ ವಿಧಾನಸೌಧದ ಪೂರ್ವ ದಿಕ್ಕಿನಲ್ಲಿರುವ ಕೆಂಪೇಗೌಡರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಲಾರ್ಪಣೆ ಮಾಡಿ ಮಾತನಾಡುತ್ತಾ, ಕೆಂಪೇಗೌಡರು ಒಬ್ಬ ದೂರದೃಷ್ಟಿ ಇದ್ದ ದಕ್ಷ ಆಡಳಿತಗಾರ, ಅವರು ಆಧುನಿಕ ಬೆಂಗಳೂರಿಗೆ ಅಡಿಪಾಯ ಹಾಕಿದವರು ಬೆಂಗಳೂರಿನ ನಾಲ್ಕು ಭಾಗಗಳಲ್ಲಿ ಗೋಪುರಗಳನ್ನು ನಿರ್ಮಿಸಿ ಬೆಂಗಳೂರು ಹೇಗಿರಬೇಕು ಎನ್ನುವುದರ ಯೋಜನೆ ತಯಾರಿಸಿ ಇಂದಿನ ಬೆಂಗಳೂರಿನ ಏನಾಗಿದೆಯೋ ಅದಕ್ಕೆ ಮೂಲ ಕಾರಣ ಕರ್ತರು ಎಂದು ಹೇಳಿದರು.

******ಧ್ವನಿ **** ಮುಖ್ಯಮಂತ್ರಿ ಸಿದ್ದರಾಮಯ್ಯ**

ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕೆಂಪೇಗೌಡರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ನಾಡಪ್ರಭು ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸರ್ಕಾರ ಜಮೀನು ನೀಡಿದ್ದು, ಕೆಂಪೇಗೌಡ ಭವನ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗುತ್ತಿದೆ ಎಂದರು. ದೇವನಹಳ್ಳಿಯ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಕೆಂಪೇಗೌಡರ ಪ್ರತಿಮೆ ಆವರಣದಲ್ಲಿ ಥೀಮ್‌ಪಾರ್ಕ್ ನಿರ್ಮಿಸಲಾಗುತ್ತಿದ್ದು, ಪ್ರತಿವರ್ಷ ಇಲ್ಲಿ ಜಿಲ್ಲಾಡಳಿತದ ಹಾಗೂ ವಿಮಾನ ನಿಲ್ದಾಣ ಪ್ರಾಧಿಕಾರದ ಸಹಯೋಗದಲ್ಲಿ ಕೆಂಪೇಗೌಡರ ಜಯಂತಿ ಆಚರಿಸಲಾಗುವುದು ಎಂದು ಅವರು ಹೇಳಿದರು. ಆದಿ ಚುಂಚನಗಿರಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರೂ ಆದ ಕಂದಾಯ

ಸಚಿವ ಕೃಷ್ಣ ಬೈರೇಗೌಡ, ಸಚಿವ ಕೆ.ಎಚ್. ಮುನಿಯಪ್ಪ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ರಾಜ್ಯದ ಜನತೆಗೆ ಕೇಂದ್ರ ಸಚಿವ ಎ.ಡಿ. ಕುಮಾರಸ್ವಾಮಿ, ನಾಡಪ್ರಭು ಕೆಂಪೇಗೌಡ ಜಯಂತಿಯ ಶುಭಾಶಯ ಕೋರಿದ್ದಾರೆ. ನಾಡಪ್ರಭುಗಳು ಬೆಂಗಳೂರಿನ ನಿರ್ಮಾತೃ ಮತ್ತು ಅಪ್ರತಿಮ ಆಡಳಿತಗಾರರಷ್ಟೇ ಆಗಿರಲಿಲ್ಲ, ಅವರೊಬ್ಬರು ಅನನ್ಯ ದಾರ್ಶನಿಕರು, ಶಾಂತಿಪ್ರಿಯರು, ಸರ್ವಜನರ ಶ್ರೇಯಸ್ಸಿಗಾಗಿ ದುಡಿದ ಮಹಾನ್ ಮಾನವತಾವಾದಿ ಎಂಬುದನ್ನು ಅನುಕ್ಷಣವೂ ಸ್ಮರಿಸೋಣ ಎಂದು ಅವರು ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ರಾಜ್ಯ ಮಟ್ಟದ ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮದ ಅಂಗವಾಗಿ ಕೆಂಪೇಗೌಡ ವಂಶಸ್ಥರ ಮೂಲ ಸ್ಥಳವಾದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಆವತಿ ಗ್ರಾಮದಿಂದ ಹೊರಟ ಕೆಂಪೇಗೌಡ ಜ್ಯೋತಿ ರಥಯಾತ್ರೆಗೆ ಆಹಾರ ನಾಗರಿಕ ಸರಬರಾಜು, ಗ್ರಾಹಕ ವ್ಯವಹಾರಗಳ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಆವತಿ ಚನ್ನಕೇಶವ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ರಥಯಾತ್ರೆಗೆ ಚಾಲನೆ ನೀಡಿದರು. ಕೆಂಪೇಗೌಡರ ದೂರದೃಷ್ಟಿಯ ಫಲವಾಗಿ ಇಂದು ಬೆಂಗಳೂರು ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಂಡಿದೆ. ಕೆರೆ ಕುಂಟೆಗಳನ್ನು ನಿರ್ಮಿಸುವ ಮೂಲಕ ಪರಿಸರ ಕಾಳಜಿ ಹೊಂದಿದ್ದ ಕೆಂಪೇಗೌಡರ ಆದರ್ಶಗಳನ್ನು ನಾವು ಪಾಲಿಸಬೇಕಿದ್ದು, ಕೆಂಪೇಗೌಡ ಅವರ ಜಾತ್ಯಾತೀತ ಪರಿಕಲ್ಪನೆ, ಆಡಳಿತ ವೈಖರಿ, ಸಾಮಾಜಿಕ ಕಾಳಜಿ, ಸಮಾನತೆಯ ತತ್ವಗಳು ಮಾದರಿಯಾಗಿವೆ ಎಂದು ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದರು.

<><*<><>*><>

ಬಿಡದಿ ಕೈಗಾರಿಕಾ ಪ್ರದೇಶದಲ್ಲಿ ನೂತನವಾಗಿ ಪ್ರಾರಂಭವಾಗಿರುವ ಲಿನಿಎಜ್ ಪವರ್ ಬ್ಯಾಟರಿ ಸ್ಟೋರೇಜ್ ಉತ್ಪಾದನಾ ಘಟಕವನ್ನು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಇಂದು ಉದ್ಘಾಟಿಸಿದರು. ನೂತನ ಘಟಕಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ವಿದ್ಯುತ್ ಅನ್ವೇಷಣೆಯು ಇಡಿ ಜಗತ್ತಿನಲ್ಲಿ ಬದಲಾವಣೆಗೆ ಕಾರಣವಾಗಿದ್ದು, ಇಂದು ವಿದ್ಯುತ್ ಇಲ್ಲದ ಬದುಕು ಸಾಧ್ಯವಿಲ್ಲ. ಮುಂದಿನ ೨೦೩೦ರ ವೇಳೆಗೆ ೫೦೦ ಗಿಗಾವ್ಯಾಟ್ ಹಸಿರು ಇಂಧನ ಉತ್ಪಾದನೆಗೆ ಕೇಂದ್ರ ಸರ್ಕಾರ ಗುರಿ ಹೊಂದಿದೆ ಎಂದು ಹೇಳಿದರು. ಇಂದು ಜಗತ್ತಿನಲ್ಲಿ ಕಾರ್ಬನ್‌ನಿಂದ ವಾತಾವರಣ ಹಾಳಾಗುತ್ತಿದ್ದು, ಹಸಿರು ಇಂಧನ ಉತ್ಪಾದನೆ ಮಾತ್ರ ಪರ್ಯಾಯ ಮಾರ್ಗವಾಗಿದೆ. ಹಾಗಾಗಿ ಹಸಿರು ಇಂಧನ ಉತ್ಪಾದನೆಗೆ ಹೆಚ್ಚು ಒತ್ತು ನೀಡಲಾಗುತ್ತಿದೆ ಎಂದು ಅವರು ಹೇಳಿದರು. ನಂತರ ಮಾತನಾಡಿದ ಇಂಧನ ಸಚಿವ ಕೆ.ಜೆ.ಜಾರ್ಜ್, ಸರ್ಕಾರ ನವೀಕೃತ ಇಂಧನ ಉತ್ಪಾದನೆಗೆ ಹೆಚ್ಚು ಒತ್ತು ನೀಡುತ್ತಿದ್ದು, ಮುಂದಿನ ಒಂದು ವರ್ಷದಲ್ಲಿ ಖಾಸಗಿ ಕಂಪನಿಗಳು ೯ ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡಲಿವೆ. ಈಗಾಗಲೆ ರೈತರಿಗೆ ೧೦ ಎಚ್.ಪಿ.ವರೆಗೆ ಉಚಿತ ವಿದ್ಯುತ್ ನೀಡಲಾಗುತ್ತಿದ್ದು, ಹಗಲು ವೇಳೆಯಲ್ಲಿ ಹೆಚ್ಚು ಕಾಲ ರೈತರಿಗೆ ವಿದ್ಯುತ್ ನೀಡಲು ಪ್ರಯತ್ನಿಸಲಾಗುತ್ತಿದೆ ಎಂದು ಅವರು ಹೇಳಿದರು.

<><*<><>*><>

ರಾಜ್ಯ ಪೊಲೀಸ್ ಪ್ರಧಾನ ಕಚೇರಿಯಲ್ಲಿ ನಡೆಯುತ್ತಿರುವ ವಾರ್ಷಿಕ ಸಮಾವೇಶದಲ್ಲಿ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಅವರು ಪೊಲೀಸ್ ಪ್ರಗತಿ ಪರಿಶೀಲನೆ ನಡೆಸಿ, ಹಲವು ಪ್ರಮುಖ ವಿಷಯಗಳ ಕುರಿತು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕರಾವಳಿ ಭಾಗದಲ್ಲಿ ಸೌಹಾರ್ದತೆ ಕಾಪಾಡಲು ವಿವಿಧ ಧಾರ್ಮಿಕ ಸಂಘಟನೆಗಳ ಮುಖಂಡರೊಂದಿಗೆ ನಿರಂತರವಾಗಿ ಸಭೆ ನಡೆಸಬೇಕು. ದ್ವೇಷ ಭಾಷಣ,

ಪ್ರಚೋದನಾತ್ಮಕ ಭಾಷಣ ಮಾಡುವವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಅವರು ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರಚೋದನಾತ್ಮಕ ಪೋಸ್ಟ್ ಹಾಕುವರ ವಿರುದ್ಧ, ಸುಳ್ಳು ಸುದ್ದಿ ಹರಡುವರ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸಬೇಕು. ಈ ಬಗ್ಗೆ ಕ್ರಿಯಾ ಯೋಜನೆ ರೂಪಿಸುವಂತೆ ಅಧಿಕಾರಿಗೆ ಸೂಚನೆ ನೀಡಿದರು. ಆಂಧ್ರಪ್ರದೇಶ, ಗೋವಾ ರಾಜ್ಯಗಳಿಂದ ಮಾದಕ ವಸ್ತುಗಳು ಹೆಚ್ಚಿನ ಪ್ರಮಾಣದಲ್ಲಿ ಸಾಗಣೆಯಾಗುತ್ತಿದೆ. ಯುವಕರ ಕೈಗೆ ಗಾಂಜಾ ಸುಲಭವಾಗಿ ಸಿಗುತ್ತಿದೆ, ಇದನ್ನು ಸಂಪೂರ್ಣವಾಗಿ ಮಟ್ಟಹಾಕಲು ಪೊಲೀಸರು ಮತ್ತಷ್ಟು ಪರಿಣಾಮಕಾರಿಯಾಗಿ ಕೆಲಸ ಮಾಡಬೇಕು  ಎಂದು ಅವರು ಹೇಳಿದ್ದಾರೆ.

<><*<><>*><>

ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದ ವನ್ಯಜೀವಿ ಅಭಯಾರಣ್ಯದಲ್ಲಿ ಹುಲಿ ಮತ್ತು ಅದರ ನಾಲ್ಕು ಮರಿಗಳ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಅರಣ್ಯ ಮತ್ತು ಪೊಲೀಸ್ ಅಧಿಕಾರಿಗಳು ಇಂದು ಹಸುವಿನ ಮಾಲೀಕರಿಗಾಗಿ ಹುಡುಕಾಟ ಆರಂಭಿಸಿದ್ದಾರೆ. ವಿಷಪ್ರಾಶನದಿಂದಾಗಿ ಹುಲಿ ಮತ್ತು ಅದರ ನಾಲ್ಕು ಮರಿಗಳ ಅಸಹಜ ಸಾವು ನಿನ್ನೆ ಬೆಳಕಿಗೆ ಬಂದಿದ್ದು, ಇದು ತೀವ್ರ ಕಳವಳಕಾರಿ ಘಟನೆಯಾಗಿದ್ದು, ಹುಲಿ ಮತ್ತು ನಾಲ್ಕು ಮರಿಗಳು ಅಸ್ವಾಭಾವಿಕವಾಗಿ ಸಾವನ್ನಪ್ಪಿವೆ ಎಂದು ಅಧಿಕಾರಿಗಳು ದೃಢಪಡಿಸಿದ್ದಾರೆ. ಹುಲಿ ಮತ್ತು ಮರಿಗಳ ಮೃತದೇಹಗಳು ಅಭಯಾರಣ್ಯದ ಹೂಗ್ಯಂ ವ್ಯಾಪ್ತಿಯ ಮೀಣ್ಯಂ ಅರಣ್ಯ ಪ್ರದೇಶದಲ್ಲಿ ಪತ್ತೆಯಾಗಿವೆ. ಕೇಂದ್ರ ಸಚಿವ ಕುಮಾರಸ್ವಾಮಿ, ಮಲೆಮಹದೇಶ್ವರ ಬೆಟ್ಟದಲ್ಲಿ ಐದು ಹುಲಿಗಳ ಸಾವಿನ ಬಗ್ಗೆ ಕಳವಳ ವ್ಯಕ್ತಪಡಿಸಿ, ಇಂತಹ ಧಾರುಣ ಘಟನೆ ನಡೆಯಬಾರದಿತ್ತು. ಇದು ರಾಜ್ಯಕ್ಕೆ ಕಪ್ಪುಚುಕ್ಕೆ, ಹುಲಿಗಳು ಯಾವ ಕಾರಣಕ್ಕೆ ಸತ್ತಿವೆ ಎಂಬ ಮಾಹಿತಿ ಇಲ್ಲ. ಈ ಬಗ್ಗೆ ವಿಸ್ತೃತ ತನಿಖೆ ಆಗಿ ಏನಾಗಿದೆ ಎನ್ನುವ ಮಾಹಿತಿ ಹೊರ ಬರಲಿ ಎಂದು ಹೇಳಿದರು.

<><*<><>*><>

ಇಂದು ಆಷಾಢ ಶುಕ್ರವಾರ ಹಿನ್ನೆಲೆ ನಾಡ ದೇವಿ ಚಾಮುಂಡೇಶ್ವರಿಗೆ  ಮುಂಜಾನೆ ಪಂಚಾಮೃತ ಅಭಿಷೇಕ, ಅರ್ಚನೆ ಮಾಡಲಾಯಿತು. ಹೂವಿನ ಅಲಂಕಾರದಲ್ಲಿದ್ದ ದೇವಿಯ ದರ್ಶನವನ್ನು ಭಕ್ತರು ಪಡೆದರು. ಕಳೆದ ಬಾರಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ  ಹಿನ್ನಲೆಯಲ್ಲಿ  ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.  ಪ್ರತಿವರ್ಷದಂತೆ ಈ ಬಾರಿಯೂ ಖಾಸಗಿ ವಾಹನಗಳ ಪ್ರವೇಶ ನಿರ್ಬಂಧಿಸಲಾಗಿದ್ದು ಕೆ.ಎಸ್.ಆರ್.ಟಿ.ಸಿ ವತಿಯಿಂದ ಉಚಿತ ಬಸ್ ವ್ಯವಸ್ಥೆ ಮಾಡಲಾಗಿದೆ. ಲಲಿತಮಹಲ್ ಪ್ಯಾಲೇಸ್ ಆವರಣದಿಂದ ಉಚಿತ ಬಸ್ ವ್ಯವಸ್ಥೆ ಮಾಡಲಾಗಿದೆ. ಭಕ್ತರಿಗೆ ನಾಡದೇವಿಯ ದರ್ಶನ ಪಡೆಯಲು ಜಿಲ್ಲಾಡಳಿತದ ವತಿಯಿಂದ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ. ಭಕ್ತರ ಅನುಕೂಲಕ್ಕಾಗಿ ೩೦೦ರೂಪಾಯಿ ಹಾಗೂ  ೨ ಸಾವಿರ ರೂಪಾಯಿ  ಟಿಕೆಟ್ ವ್ಯವಸ್ಥೆ ಮಾಡಲಾಗಿದೆ.

<><*<><>*><>

ಕೋಲಾರ ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಅಡಿಯಲ್ಲಿ ೨೦೨೪ರ ಮುಂಗಾರು ಹಂಗಾಮಿನಲ್ಲಿ ಬೆಳೆ ಸಾಲ ಪಡೆದ ಹಾಗೂ ಬೆಳೆ ಸಾಲ ಪಡೆಯದ ರೈತರು ನೋಂದಾಯಿಸಿಕೊಳ್ಳಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಸುಮಾ ತಿಳಿಸಿದ್ದಾರೆ. ಬೆಳೆ ಸಾಲ ಪಡೆದ ರೈತರು ಬೆಳೆ ವಿಮೆ ಮಾಡಿಸಲು ಇಚ್ಚಿಸದಿದ್ದಲ್ಲಿ ಬ್ಯಾಂಕಿಗೆ ಬೆಳೆ ನೋಂದಣಿ

ಅಂತಿಮ ದಿನಾಂಕಕ್ಕಿಂತ ೭ ದಿನಗಳ ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರವನ್ನು ಸಲ್ಲಿಸಬಹುದು. ಬೆಳೆಗಳ ಪ್ರತಿ ಎಕರೆಗೆ ರೈತರು ಪಾವತಿಸಬೇಕಾದ ಪ್ರೀಮಿಯಂಅನ್ನು ಇದೇ ೩೦ರೊಳಗೆ ಪಾವತಿಸಿ, ನೋಂದಾಯಿಸಿಕೊಳ್ಳಬೇಕೆಂದು ಅವರು ಹೇಳಿದ್ದಾರೆ.

**<><*<><>*><>**

ಸಂಕ್ಷಿಪ್ತ ಸುದ್ದಿ

೧. ಸರ್ಕಾರದ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ದೊರಕುವಲ್ಲಿ ವಿಳಂಬವಾಗಬಾರದು. ಈ ನಿಟ್ಟಿನಲ್ಲಿ ಸಂಬಂಧಿತ ಅಧಿಕಾರಿಗಳು ವಿಶೇಷ ಆಸಕ್ತಿ ವಹಿಸಿ ಕಾರ್ಯನಿರ್ವಹಿಸಬೇಕೆಂದು ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ತಿಳಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**